ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು 560012

ಸಂಖ್ಯೆ:ಪಿಯು/ಸಿಬ್ಬಂದಿ/ಸಿಆರ್-02/007/ಎನ್‌ಓಸಿ/2018-19 ದಿನಾಂಕ:23-02-2019

**ಜ್ಞಾಪನ**

**ವಿಷಯ:-** ಕೇಂದ್ರ/ರಾಜ್ಯ ಸರ್ಕಾರ, ವಿಶ್ವವಿದ್ಯಾಲಯ ಹಾಗೂ ಇತರೆ ಹುದ್ದೆಗಳಿಗೆ ಮತ್ತು ಕೆ.ಸೆಟ್ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:-** ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಧಾರವಾಡ ರವರು ಸಲ್ಲಿಸಿರುವ ಪ್ರಸ್ತಾವನೆಗಳು

****

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜು ಇಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಸಿಬ್ಬಂದಿಯವರು ರಾಜ್ಯ ಸರ್ಕಾರದ/ಕೇಂದ್ರ ಸರ್ಕಾರದ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ಕೋರಿ ಉಪನಿರ್ದೇಶಕರ ಮುಖೇನ ಮನವಿ ಪತ್ರಗಳನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಈ ಕೆಳಕಂಡ ಬೋಧಕ ಸಿಬ್ಬಂದಿ ವರ್ಗದವರ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತಿಗೊಳಪಟ್ಟು ಅನುಮತಿ ನೀಡಿದೆ.

| ಕ್ರ ಸಂ | ಹೆಸರು ಮತ್ತು ಕಾಲೇಜು ವಿಳಾಸ<br>ಶ್ರೀಮತಿ/ಶ್ರೀ/ಕುಮಾರಿ | ಅನುಮತಿ ಕೋರಲಾದ ಹುದ್ದೆ |
|---|---|---|
| 1. | ಶ್ರೀ ಯಲ್ಲಪ್ಪ ಹೆಚ್ ಭಜಂತ್ರಿ,<br>ರಾಜ್ಯಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು,<br>ಧಾರವಾಡ | ನವೋದಯ ವಿದ್ಯಾಲಯ ಸಮಿತಿ, ರವರು ಆಹ್ವಾನಿಸಿರುವ ಪ್ರಾಚಾರ್ಯರ ಹುದ್ದೆಗೆ ಅರ್ಜಿ ಸಲ್ಲಿಸಲು |
| 2 | ಶ್ರೀ ಮಂಜುನಾಥ ರಾಜಶೇಖರ ಹರಮಗ,<br>ರಸಾಯನ ಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು,<br>ಧಾರವಾಡ | 1)ನವೋದಯ ವಿದ್ಯಾಲಯ ಸಮಿತಿ, ರವರು ಆಹ್ವಾನಿಸಿರುವ ಪ್ರಾಚಾರ್ಯರ ಹುದ್ದೆಗೆ ಅರ್ಜಿ ಸಲ್ಲಿಸಲು<br>2)ಆಂಧ್ರಪ್ರದೇಶ ಪಬ್ಲಿಕ್ ಸರ್ವೀಸ್ ಕಮೀಷನ್, ವಿಜಯವಾಡ ರವರು ಕರೆದಿರುವ ಗ್ರೂಪ್ 1 &2 ಹುದ್ದೆಗೆ ಅರ್ಜಿ ಸಲ್ಲಿಸಲು |

**ಷರತ್ತುಗಳು:**

1. ಸದರಿ ಸಿಬ್ಬಂದಿಗಳು, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸಿಬ್ಬಂದಿಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು, ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ, ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಸದರಿ ಸಿಬ್ಬಂದಿ/ಉಪನ್ಯಾಸಕರುಗಳು ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
4. ಸದರಿ ಸಿಬ್ಬಂದಿಗಳು /ಉಪನ್ಯಾಸಕರುಗಳು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

23/2

ಜಂಟಿ ನಿರ್ದೇಶಕರು(ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**

1.ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರಿಗೆ.
2.ಸಹಾಯಕ ನಿರ್ದೇಶಕರು, ಇ-ಆಡಳಿತ, ಪಪೂಶಿ ಇ, ಬೆಂಗಳೂರು.
3.ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ
4.ಕಛೇರಿ ಪ್ರತಿ.